**ಸಾಕ್ಷಿಯನ್ನು ದಿಃ 09.03.2026 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದಃ**

ಈ ದಿನ ನಾನು ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ನಮೂದಿಸಿರುವ ಎಲ್ಲಾ ವಿಷಯಗಳು ಸರಿಯಾಗಿ ಮತ್ತು ಸತ್ಯವಾಗಿರುತ್ತವೆ. ಅದಕ್ಕೆ ನನ್ನ ಸಹಿ ಇರುತ್ತದೆ.

ಪ್ರಥಮ ವರ್ತಮಾನ ವರದಿ ಮತ್ತು ಲಗತ್ತಾದ ತರ್ಜುಮೆ ಪ್ರತಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 1 ಎಂದು,

ದೂರಿನ ಮತ್ತು ಲಗತ್ತಾದ ತರ್ಜುಮೆ ಪ್ರತಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 2 ಎಂದು,

ಸ್ಥಳ ಪಂಚನಾಮೆ ಮತ್ತು ಲಗತ್ತಾದ ತರ್ಜುಮೆ ಪ್ರತಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 3 ಎಂದು,

57 ಔಷಧಿ ಪಾವತಿ ರಸೀದಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ. 4 ಎಂದು,

ಎರಡು ವಾಹನದ ಬಿಲ್ ಹಾಜರು ಪಡಿಸಿದ್ದು  ಒಟ್ಟಾಗಿ ನಿಪಿ. 5 ಎಂದು,

ಒಂದು ಪೇ ಸ್ಲಿಪ್ ಹಾಜರು ಪಡಿಸಿದ್ದು ನಿಪಿ. 6 ಎಂದು,

ಒಂದು ಹೊರರೋಗಿ ಸಮ್ಮರಿ ಹಾಜರು ಪಡಿಸಿದ್ದು ಅದನ್ನು ನಿಪಿ. 7 ಎಂದು,

ಆಫರ್ ಲೆಟರ್  ಅನ್ನು ಹಾಜರು ಪಡಿಸಿದ್ದು ಅದನ್ನು ನಿಪಿ. 8 ಎಂದು,

ಒಂದು ಡಿಸ್ಚಾರ್ಜ್ ಸಮ್ಮರಿಯನ್ನು ಹಾಜರುಪಡಿಸಿದ್ದು, ನಿಪಿ. 9 ಎಂದು,

ಆಧಾರ್ ಕಾರ್ಡ್  ನ ನೋಟರಿಕೃತ ದಾಖಲೆ ಹಾಜರುಪಡಿಸಿದ್ದು, ಅದನ್ನು ನಿಪಿ. 10 ಎಂದು,

ಡಿಸೆಬಿಲಿಟಿ ಐ.ಡಿ. ಕಾರ್ಡ್ ಅನ್ನು ಹಾಜರು ಪಡಿದ್ದು ನಿಪಿ. 11 ಎಂದು ಗುರುತಿಸಲಾಯಿತು.

(ನಿಪಿ.  10  ರ ಮೂಲ ದಾಖಲೆಗಳನ್ನು ಪರಿಶೀಲಿಸಿ ಸಾಕ್ಷಿಗೆ ಹಿಂದಿರುಗಿಸಲಾಯಿತು)

(ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶವನ್ನು ಕೋರಿದ್ದು, ನೀಡಲಾಯಿತು)

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು

ಮತ್ತು ಎಂ.ಎ.ಸಿ.ಟಿ., ಮೈಸೂರು.